**ಕರ್ನಾಟಕ ಸರ್ಕಾರ**
**ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ನೃಪತುಂಗ ರಸ್ತೆ,**
**ಬೆಂಗಳೂರು – 560 001**

ಸಂಖ್ಯೆ : ಆ.ಆಶಾ.ಕು.ನಿ:ಶೌ.ಒ.:48:2011–12 ದಿನಾಂಕ : 21.10.2011

**–: ಸು ತ್ತೋ ಲೆ :–**

ವಿಷಯ : ರಾಜ್ಯದ ಎಲ್ಲಾ ಪ್ರಾಥಮಿಕ ಶಾಲೆಗಳಿಗೆ ಕುಡಿಯುವ ನೀರು, ಶೌಚಾಲಯ ಹಾಗೂ ಇತರೆ ಮೂಲಭೂತ ಸೌಕರ್ಯಗಳನ್ನು ಒದಗಿಸುವ ಬಗ್ಗೆ.

ಉಲ್ಲೇಖ : ಮಾನ್ಯ ಸರ್ವೋಚ್ಚ ನ್ಯಾಯಾಲಯದ ರಿಟ್ ಪಿಟಿಷನ್ ಸಂಖ್ಯೆ : 631/2004.

– – –

ಉಲ್ಲೇಖಿತ ಮಾನ್ಯ ಸರ್ವೋಚ್ಚ ನ್ಯಾಯಾಲಯದ ರಿಟ್‌ಪಿಟಿಷನ್‌ನಲ್ಲಿ ರಾಜ್ಯದ ಎಲ್ಲಾ ಶಾಲೆಗಳಿಗೆ ಕುಡಿಯುವ ನೀರು, ಹೆಣ್ಣು ಮತ್ತು ಗಂಡು ಮಕ್ಕಳಿಗೆ ಪ್ರತ್ಯೇಕ ಶೌಚಾಲಯ ಮತ್ತು ಇತರೆ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಗೌರವಾನ್ವಿತ ನ್ಯಾಯಾಲಯವು ಕಾಲಕಾಲಕ್ಕೆ ನಿರ್ದೇಶನಗಳನ್ನು ನೀಡುತ್ತಾ ಬಂದಿದೆ. ಈಗಾಗಲೇ ಕುಡಿಯುವ ನೀರಿನ ವ್ಯವಸ್ಥೆ ಎಲ್ಲಾ ಶಾಲೆಗಳಿಗೆ ಒದಗಿಸಲಾಗಿದೆ. ಆದರೆ, ಕೆಲವು ಜಿಲ್ಲೆಗಳಲ್ಲಿ ಶಾಶ್ವತ ವ್ಯವಸ್ಥೆ ಆಗುವವರೆಗೆ ತಾತ್ಕಾಲಿಕವಾಗಿ ಕುಡಿಯುವ ನೀರನ್ನು ಕಂಟೈನರ್ ಮೂಲಕ ಸರಬರಾಜು ಮಾಡಲಾಗುವುದೆಂದು ಜಿಲ್ಲಾ ಉಪನಿರ್ದೇಶಕರು ತಿಳಿಸಿರುತ್ತಾರೆ. ಅಂತಹ ಶಾಲೆಗಳ ಸಂಖ್ಯೆ 1051 ಇದೆ. ಈ ಶಾಲೆಗಳಲ್ಲಿ ಅತೀ ಶೀಘ್ರವಾಗಿ ಖಾಯಂ ವ್ಯವಸ್ಥೆಯನ್ನು ಮಾಡುವಂತೆ ಎಲ್ಲಾ ಜಿಲ್ಲಾ ಉಪನಿರ್ದೇಶಕರುಗಳಿಗೆ ತಿಳಿಸಲಾಗಿತ್ತು. ಈ ಸಂಬಂಧ ಎಂಥಹ ಪರಿಸ್ಥಿತಿ ಎದುರಾದರೂ ಸಹ ಈ ಕಾರ್ಯವು ದಿನಾಂಕ : 31.10.2011 ನ್ನು ಮೀರಬಾರದೆಂದು ಸಹ ಸೂಚಿಸಿದೆ.

ದಿನಾಂಕ : 18.10.2011 ರಂದು ಮಾನ್ಯ ಸರ್ವೋಚ್ಚ ನ್ಯಾಯಾಲಯವು ಎಲ್ಲಾ ಶಾಲೆಗಳಲ್ಲಿ ಶೌಚಾಲಯವನ್ನು ದಿನಾಂಕ : 30.10.2011ರೊಳಗೆ ನಿರ್ಮಿಸಲು ನಿರ್ದೇಶನ ನೀಡಿರುತ್ತದೆ. ಒಂದು ವೇಳೆ, ಖಾಯಂ ಶೌಚಾಲಯವನ್ನು ನಿರ್ಮಿಸಲು ಸಾಧ್ಯವಿಲ್ಲವೆಂಬ ಪರಿಸ್ಥಿತಿಯಲ್ಲಿ, ತಾತ್ಕಾಲಿಕ ವ್ಯವಸ್ಥೆಯನ್ನು ಕಲ್ಪಿಸಿ ಖಾಯಂ ಶೌಚಾಲಯವನ್ನು ದಿನಾಂಕ: 31.12.2011ರೊಳಗಾಗಿ ಒದಗಿಸುವುದು ಕಡ್ಡಾಯವೆಂದು ನಿರ್ದೇಶಿಸಿರುತ್ತದೆ.

ಅಲ್ಲದೆ, ತಾವು ನೀಡಿದ ಮಾಹಿತಿಯ ಆಧಾರದ ಮೇಲೆ ತಮ್ಮ ಜಿಲ್ಲೆಯಲ್ಲಿ ಎಷ್ಟು ಶಾಲೆಗಳಲ್ಲಿ ಶೌಚಾಲಯವು ಇಲ್ಲವೆಂಬುದರ ಕುರಿತು ಮಾನ್ಯ ಸರ್ವೋಚ್ಚ ನ್ಯಾಯಾಲಯಕ್ಕೆ ಈಗಾಗಲೇ ಮಾಹಿತಿ ನೀಡಲಾಗಿದೆ. ಪ್ರಾಥಮಿಕ ಶಾಲೆಗಳಲ್ಲಿ ಸರ್ವ ಶಿಕ್ಷಣ ಅಭಿಯಾನದ ಅನುದಾನ, ಶಿಕ್ಷಣ ಇಲಾಖೆಯ ಅನುದಾನ ಹಾಗೂ ಜಿಲ್ಲಾ ಪಂಚಾಯತ್, ತಾಲ್ಲೂಕು ಪಂಚಾಯತ್ ಮತ್ತು ಗ್ರಾಮ ಪಂಚಾಯತ್ ಅನುದಾನದಿಂದ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಶೌಚಾಲಯದ ನಿರ್ಮಾಣ ಕಾರ್ಯವನ್ನು ಅನುಷ್ಠಾನಗೊಳಿಸಿರುವುದು ತಮಗೆಲ್ಲ ತಿಳಿದ ವಿಷಯವಾಗಿದೆ. ಈ ಸಂಬಂಧ ಹಿಂದಿನ ಪತ್ರಗಳಲ್ಲಿ ಶೌಚಾಲಯಗಳ ನಿರ್ಮಾಣ ಕಾರ್ಯವನ್ನು ಪೂರ್ಣಗೊಳಿಸಲು ಕಾಲಮಿತಿ ನಿಗದಿಪಡಿಸಿದ್ದರೂ ಸಹ, ಆ ಎಲ್ಲಾ ಕಾಲಮಿತಿಯನ್ನು ಅಧಿಕ್ರಮಿಸಿ (supercede) ಮಾನ್ಯ ಸರ್ವೋಚ್ಚ ನ್ಯಾಯಾಲಯವು ನಿಗದಿಪಡಿಸಿರುವ ಕಾಲಾವಧಿಯನ್ನು ಮಾತ್ರ ಗಣನೆಗೆ ತೆಗೆದುಕೊಂಡು ಶೌಚಾಲಯವಿಲ್ಲದ ಹಿರಿಯ ಮತ್ತು ಕಿರಿಯ ಪ್ರಾಥಮಿಕ ಶಾಲೆಗಳಲ್ಲಿ ದಿನಾಂಕ:30.11.2011 ರೊಳಗಾಗಿ ಪೂರ್ಣಗೊಳಿಸಲು ಕ್ರಮ ಕೈಗೊಳ್ಳುವುದು ಕಡ್ಡಾಯವಾಗಿರುತ್ತದೆ. ಈ ನಿಟ್ಟಿನಲ್ಲಿ ತಮ್ಮ ಜಿಲ್ಲೆಯ ಜಿಲ್ಲಾಧಿಕಾರಿಗಳು ಹಾಗೂ ಮುಖ್ಯ ಜಿಲ್ಲಾ ಪಂಚಾಯತ್ ಕಾರ್ಯನಿರ್ವಹಣಾಧಿಕಾರಿಗಳವರ ನೇತೃತ್ವದಲ್ಲಿ ಮೊದಲ ಆದ್ಯತೆಯ ಮೇರೆಗೆ ಬೃಹತ್ ಕಾರ್ಯವನ್ನಾಗಿ ಹಮ್ಮಿಕೊಂಡು ದಿನಾಂಕ: 30.11.2011 ರೊಳಗಾಗಿ ಪೂರ್ಣಗೊಳಿಸಿ ಅನುಪಾಲನಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಲು ಸೂಚಿಸಿದೆ.

(ತುಷಾರ್ ಗಿರಿ ನಾಥ್)
ಆಯುಕ್ತರು,
ಸಾರ್ವಜನಿಕ ಶಿಕ್ಷಣ ಇಲಾಖೆ,
ಬೆಂಗಳೂರು.

1) ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು (ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ, ಇವರುಗಳಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ.

ಪ್ರತಿಯನ್ನು :

1) ನಿರ್ದೇಶಕರು (ಪ್ರೌಢ ಶಿಕ್ಷಣ), ಆಯುಕ್ತರ ಕಛೇರಿ, ಬೆಂಗಳೂರು, ಇವರಿಗೆ ಮಾಹಿತಿಗಾಗಿ.
2) ನಿರ್ದೇಶಕರು (ಪ್ರಾಥಮಿಕ ಶಿಕ್ಷಣ), ಆಯುಕ್ತರ ಕಛೇರಿ, ಬೆಂಗಳೂರು, ಇವರಿಗೆ ಮಾಹಿತಿಗಾಗಿ.
3) ಉಪ ನಿರ್ದೇಶಕರು (ಯೋಜನೆ), ಆಯುಕ್ತರ ಕಛೇರಿ, ಬೆಂಗಳೂರು, ಇವರಿಗೆ ಮಾಹಿತಿಗಾಗಿ.
4) ಕಛೇರಿ ಪ್ರತಿ.